**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| 01 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : 746 |
| 02 | ಸದಸ್ಯರ ಹೆಸರು | : ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 03 | ಉತ್ತರಿಸುವ ದಿನಾಂಕ: | : 13.03.2025 |
| 04 | ಉತ್ತರಿಸುವ ಸಚಿವರು | : ಮಾನ್ಯ ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಾನೂನು ಸುವ್ಯವಸ್ಥೆ ಕಾಪಾಡಲು ರಾಜ್ಯದಲ್ಲಿ ಸಾರ್ವಜನಿಕವಾಗಿ ನಡೆಯುವ ಯಾವುದೇ ಸಭೆ ಸಮಾರಂಭ ಕಾರ್ಯಕ್ರಮ ಮೆರವಣಿಗೆಗಳು ನಡೆಸುವ ಮೊದಲು ಕಾರ್ಯಕ್ರಮಗಳಲ್ಲಿ ಮೈಕ್ ಬಳಕೆಗೆ ಮತ್ತು ಮೆರವಣಿಗೆಗಳಿಗೆ ಪೊಲೀಸ್ ಅನುಮತಿ ಕಡ್ಡಾಯವಾಗಿ ಪಡೆಯಬೇಕು ಎಂಬ ಸೂಚನೆಯನ್ನು ಸಾರ್ವಜನಿಕರು ಪಾಲಿಸುವಂತೆ ಪೊಲೀಸ್ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ; | ಹೌದು |
| ಆ | ರಾಜ್ಯದಲ್ಲಿ ಸಂಘ ಸಂಸ್ಥೆಗಳಿಂದ ನಡೆಸುವ ಸಭೆ ಸಮಾರಂಭ ಕಾರ್ಯಕ್ರಮ ಮೆರವಣಿಗೆಗಳಿಗೆ ಪೊಲೀಸ್ ಅನುಮತಿ ಪಡೆಯುತ್ತಿಲ್ಲ ಎಂಬ ಬಗ್ಗೆ ಸಾರ್ವಜನಿಕರಿಂದ ಬಂದ ದೂರುಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು; | ಸಂಘ ಸಂಸ್ಥೆಗಳು ನಡೆಸುವ ಬಹಿರಂಗ ಸಭೆ, ಸಮಾರಂಭ, ಕಾರ್ಯಕ್ರಮ, ಮೆರವಣಿಗೆಗಳಿಗೆ ಪೊಲೀಸ್ ಅನುಮತಿಯೊಂದಿಗೆ ನಡೆಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಒಂದುವೇಳೆ ಪೊಲೀಸ್ ಅನುಮತಿ ಪಡೆಯದೇ ಸಭೆ, ಸಮಾರಂಭ ನಡೆಸಿದ್ದಲ್ಲಿ ಅಂತಹವರ ಮೇಲೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ | ರಾಷ್ಟ್ರೀಯ ಸ್ವಯಂ ಸೇವಕ ಸಂಘವು (RSS) ನೋಂದಾಯಿತವಲ್ಲದ ಸಂಸ್ಥೆಯಾಗಿರದೆ ನೂರಾರು ಸಭೆ ಸಮಾರಂಭ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಈ | RSSನ ಈ ಕಾರ್ಯಕ್ರಮಗಳಿಗೆ ಅನುಮತಿ ಕೇಳದೆ ಮಾಹಿತಿಗಾಗಿ ಎಂದು ಕೊಟ್ಟ ಪತ್ರದ ಆಧಾರದ ಮೇಲೆ ಪೊಲೀಸ್ ಅಧಿಕಾರಿಗಳು ಮೈಕ್ ಅನುಮತಿಯಾಗಲಿ ಕೊಡದೇ ಭದ್ರತೆ ಕೊಡುತ್ತಿದ್ದಾರೆಂಬ ಬಗ್ಗೆ ಸರ್ಕಾರಕ್ಕೆ ಅರಿವಿದೆಯೇ? | ಅನುಮತಿ ಪಡೆದ ನಂತರ ಅಗತ್ಯವಿದ್ದಲ್ಲಿ ಭದ್ರತೆ ಒದಗಿಸಲಾಗುವುದು. |
| ಉ | ಈ ಕಾರ್ಯಕ್ರಮಗಳಿಗೆ ಅನುಮತಿಗಾಗಿ ಮನವಿ ಕೊಟ್ಟರೂ ಪೊಲೀಸ್ ಅಧಿಕಾರಿಗಳು ಆರ್.ಎಸ್.ಎಸ್ ನವರಿಗೆ ಪರೋಕ್ಷವಾಗಿ ಸಹಕರಿಸುವಂತೆ ಅನುಮತಿ ಕೊಡದೆ ಪೊಲೀಸ್ ಭದ್ರತೆ ಒದಗಿಸುತ್ತಿದ್ದಾರೆಂಬ ಆರೋಪಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ವಿಷಯಗಳು ಗುಪ್ತಚರ ವಿಭಾಗದಿಂದ ಸರ್ಕಾರಕ್ಕೆ ಸಿಕ್ಕಿದೆಯೇ? ಸಿಕ್ಕಿದ್ದರೆ ಸರ್ಕಾರ ಕೈಗೊಂಡ ಕ್ರಮಗಳೇನು? | ಇಲ್ಲ |

ಒಇ 112 ಎಸ್‌ಎಸ್‌ಟಿ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು